ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 14 ಸಾರಿಗೆ ಮುಷ್ಕರ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ     ದಿನಾಂಕ : DATE: 11/4/21

# ಕಾಯಂ ನೌಕರರಿಗೆ ಕಡ್ಡಾಯ ನಿವೃತ್ತಿ ಬಿಸಿ

## ವೈದ್ಯಕೀಯ ಪ್ರಮಾಣಪತ್ರ ನೀಡಿಕೆಗೆ ಆದೇಶ



ವಿಜಯವಾಣಿ ಚಿತ್ರ

ಸಾರಿಗೆ ನೌಕರರ ಮುಷ್ಕರ ಹಿನ್ನೆಲೆಯಲ್ಲಿ ಶನಿವಾರ ಬೆಂಗಳೂರಿನಲ್ಲಿ ಸರ್ಕಾರಿ ಬಸ್‌ಗಳ ಸಂಚಾರ ಬಹುತೇಕ ಸ್ಥಗಿತಗೊಂಡಿದ್ದು, ಸಾರ್ವಜನಿಕರು ಖಾಸಗಿ ಬಸ್‌ಗೆ ಮುಗಿಬಿದ್ದರು.

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಸಾರಿಗೆ ನೌಕರರ ಮುಷ್ಕರ ಹತ್ತಿಕ್ಕಲು ಒಂದಾದ ಮೇಲೊಂದು ಕಠಿಣಾಸ್ತ್ರ ಪ್ರಯೋಗಿಸುತ್ತಿರುವ ಸರ್ಕಾರ, ಇದೀಗ ಕಾಯಂ ನೌಕರರಿಗೆ ಆಘಾತ ನೀಡಿದೆ. 55 ವರ್ಷ ಮೇಲ್ಪಟ್ಟವರು ಏಪ್ರಿಲ್ 12ರ ಸಂಜೆಯೊಳಗೆ ದೈಹಿಕ ಸಾಮರ್ಥ್ಯ ದೃಢಪಡಿಸುವ ವೈದ್ಯಕೀಯ ಪ್ರಮಾಣಪತ್ರ ಕೊಡದಿದ್ದರೆ ಕಡ್ಡಾಯ ನಿವೃತ್ತಿಗೊಳಿಸುವ ಎಚ್ಚರಿಕೆ ನೀಡಿದೆ. ಈನಡುವೆ, ಸರ್ಕಾರಕ್ಕೆ ಸೆಡ್ಡು ಹೊಡೆದಿರುವ ಸಾರಿಗೆ ನೌಕರರು ಸೋಮವಾರ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲು ಸಿದ್ಧತೆ ನಡೆಸಿದ್ದಾರೆ. ಕುಟುಂಬದವರೊಂದಿಗೆ ರಾಜ್ಯದ ಎಲ್ಲ ತಾಲೂಕು ಕೇಂದ್ರಗಳಲ್ಲಿ ಮತ್ತು ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಜಮಾಯಿಸಿ, ತಟ್ಟೆ ಹಾಗೂ ಲೋಟ ಬಡಿದು ಪ್ರತಿಭಟನೆ ನಡೆಸಲು ನಿರ್ಧರಿಸಲಾಗಿದೆ.




» ಸಾರಿಗೆ ನೌಕರರ ಮುಷ್ಕರ ತಡೆಯಲು ಸರ್ಕಾರ ಮತ್ತೊಂದು ಅಸ್ತ್ರ

**1,772 ಜನರ ಕೆಲಸಕ್ಕೆ ಕುತ್ತು?:** 55 ವರ್ಷ ಮೇಲ್ಪಟ್ಟ 1,772 ನೌಕರರಿಗೆ ದೈಹಿಕವಾಗಿ ಸಮರ್ಥವಾಗಿರುವ ಬಗ್ಗೆ ವೈದ್ಯಕೀಯ ಪ್ರಮಾಣಪತ್ರ ಸಲ್ಲಿಸಲು ಸರ್ಕಾರ ನೋಟಿಸ್ ನೀಡಿದೆ. ಜಿಲ್ಲಾ ವೈದ್ಯಾಧಿಕಾರಿ ಅಥವಾ ನಿಗಮದ ಆಸ್ಪತ್ರೆಯ ವೈದ್ಯರ ಮೂಲಕ ಪ್ರಮಾಣಪತ್ರ ಪಡೆದು ಸಲ್ಲಿಸುವಂತೆ ಸೂಚಿಸಲಾಗಿದೆ. ಪ್ರಮಾಣಪತ್ರ ಸಲ್ಲಿಸಲು ಸಾಧ್ಯವಾಗದಿದ್ದರೆ ತಾವು ಕೆಲಸ ಮಾಡುತ್ತಿರುವ ಘಟಕ ವ್ಯವಸ್ಥಾಪಕರನ್ನು ಭೇಟಿಯಾಗಿ ಲಿಖಿತ ರೂಪದಲ್ಲಿ ಸಮಜಾಯಿಷಿ ನೀಡಬೇಕಿದೆ.

ಪುಟ 2

## 118 ಮಂದಿ ವಜಾ, 88 ಜನರ ವರ್ಗಾವಣೆ

ತರಬೇತಿ ನೌಕರರನ್ನು ಕೆಲಸದಿಂದ ವಜಾ ಮಾಡುವ ಪ್ರಕ್ರಿಯೆ ಮುಂದುವರಿದಿದ್ದು, ಶನಿವಾರ ಬಿಎಂಟಿಸಿಯ 60 ತರಬೇತಿ ನೌಕರರು ಹಾಗೂ 58 ಪ್ರೊಬೇಷನರಿ ನೌಕರರನ್ನು ಕರ್ತವ್ಯದಿಂದ ವಜಾ ಮಾಡಲಾಗಿದೆ. ಮುಷ್ಕರಕ್ಕೆ ಪ್ರಚೋದನೆ ನೀಡಿ, ಸಾರ್ವಜನಿಕ ಸೇವೆಗೆ ಅಡ್ಡಿಯುಂಟಾಗುವಂತೆ ಮಾಡಿದ ಕಾರಣಕ್ಕಾಗಿ ಕೆಎಸ್ಸಾರ್ಟಿಸಿಯ 88 ನೌಕರರನ್ನು ಬೇರೆ ವಿಭಾಗಗಳಿಗೆ ವರ್ಗಾವಣೆ ಮಾಡಲಾಗಿದೆ.

## ಕೋಡಿಹಳ್ಳಿ ಗಡಿಪಾರು

ಸಾರಿಗೆ ನೌಕರರ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಬೆಳಗಾವಿ ಸುವರ್ಣ ಸೌಧಕ್ಕೆ ಮುತ್ತಿಗೆ ಹಾಕುವ ಕುರಿತು ಚರ್ಚಿಸಲು ಕೋಡಿಹಳ್ಳಿ ಚಂದ್ರಶೇಖರ್ ನೇತೃತ್ವದಲ್ಲಿ ಶನಿವಾರ ಸಭೆ ಕರೆಯಲಾಗಿತ್ತು. ಸುವರ್ಣ ಸೌಧ ಬಳಿಯ ಖಾಸಗಿ ಹೋಟೆಲ್‌ನಲ್ಲಿ ಬೆಳಗ್ಗೆ 11 ಗಂಟೆಗೆ ಸಭೆ ನಡೆಸಿ ನಂತರ ಮುತ್ತಿಗೆ ಹಾಕುವ ಯೋಜನೆ ರೂಪಿಸಲಾಗಿತ್ತು. ಈ ಬಗ್ಗೆ ತಿಳಿದ ಬೆಳಗಾವಿ ಪೊಲೀಸರು, ಹೋಟೆಲ್‌ಗೆ ತೆರಳಿ ಕೋಡಿಹಳ್ಳಿ ಚಂದ್ರಶೇಖರ್‌ರನ್ನು ವಶಕ್ಕೆ ಪಡೆದು, ಬೆಳಗಾವಿಯಿಂದ ಗಡಿಪಾರು ಮಾಡಿದರು. ಭಾನುವಾರ ಕಲಬುರಗಿಯಲ್ಲಿ ನಡೆಸಲು ಉದ್ದೇಶಿಸಿರುವ ಸಭೆಯನ್ನೂ ರದ್ದುಗೊಳಿಸುವ ಸಾಧ್ಯತೆಯಿದೆ.